ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17

ದಿನಾಂಕ: 18-11-2016

# ಪತ್ರಿಕಾ ಆಮಂತ್ರಣ

1. ಸಾವಯವ ಹಾಗೂ ಸಿರಿಧಾನ್ಯ ಮೇಳ:

ಉದ್ಘಾಟನೆ:-

ಕೃಷ್ಣ ಬೈರೇಗೌಡ, ಕೃಷಿ ಸಚಿವರು

ಮಾರಾಟ ಮಳಿಗೆ ಉದ್ಘಾಟನೆ :

ಕೆ. ಜೆ. ಜಾರ್ಜ್,

ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

ಆಹಾರ ಮಳಿಗೆ ಉದ್ಘಾಟನೆ:

ಶ್ರೀಮತಿ ಜಿ. ಪದ್ಮಾವತಿ,

ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷತೆ:

ಎಸ್. ರಘು,

ಶಾಸಕರು, ಸರ್.ಸಿ.ವಿ. ರಾಮನ್ ನಗರ, ವಿಧಾನಸಭಾಕ್ಷೇತ್ರ, ಬೆಂಗಳೂರು.

ದಿನಾಂಕ 19-11-2016, ಶನಿವಾರ ಸಮಯ: ಬೆಳಿಗ್ಗೆ 11-00 ಗಂಟೆಗೆ

ಸ್ಥಳ: ಇಂದಿರಾನಗರ ಕ್ಲಬ್, ಇಂದಿರಾನಗರ, ಬೆಂಗಳೂರು.

2. ಪತ್ರಿಕಾಗೋಷ್ಠಿ:

ಡಿ.ಹೆಚ್. ಶಂಕರಮೂರ್ತಿ

ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು

ದಿನಾಂಕ: 19-11-2016 ರಂದು ಬೆಳಿಗ್ಗೆ 11-30 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 106, ಮೊದಲನೆ ಮಹಡಿ, ವಿಧಾನ ಸೌಧ

3. ಮನೆಯಂಗಳದಲ್ಲಿ ಮಾತುಕತೆ:

ತಿಂಗಳ ಅತಿಥಿ:

**ಶ್ರೀಮತಿ ಲಕ್ಷ್ಮೀ ಚಂದ್ರಶೇಖರ್, ಹಿರಿಯ ರಂಗಕರ್ಮಿಗಳು,**
**ದಿನಾಂಕ: 19-11-2016, ಶನಿವಾರ ಸಮಯ: ಸಂಜೆ 4-00 ಗಂಟೆಗೆ**
**ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಬೆಂಗಳೂರು.**

**4. ಪತ್ರಿಕಾಗೋಷ್ಠಿ:**
**ಶ್ರೀ ಈಶ್ವರ ಬಿ. ಖಂಡ್ರೆ,**
**ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು**
**ದಿನಾಂಕ: 19-11-2016 ಶನಿವಾರ ಸಮಯ: ಸಂಜೆ 4-30 ಗಂಟೆಗೆ**
**ಸ್ಥಳ: ಸಮಿತಿ ಕೊಠಡಿ, 313, ಮೂರನೇ ಮಹಡಿ ವಿಧಾನ ಸೌಧ**

## ಪತ್ರಿಕಾ ಪ್ರಕಟಣೆ

# ವಾರ್ತಾ ಇಲಾಖೆಯು ಸರ್ಕಾರ ಮತ್ತು ಜನತೆಯ ನಡುವೆ ಸೇತುವೆಯಾಗಿ ಕೆಲಸ ಮಾಡಬೇಕು

ಬೆಂಗಳೂರು, ನ. 18 : (ಕರ್ನಾಟಕ ವಾರ್ತೆ)

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರ ಮತ್ತು ಜನತೆಯ ನಡುವೆ ಸೇತುವೆಯಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಂತರ್ಜಾಲ ತಾಣ ಮತ್ತು ಕರ್ನಾಟಕ ವಾರ್ತೆ ಬ್ಲಾಗ್ ಅನ್ನು ಉದ್ಘಾಟಿಸಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಬಂದಿದ್ದ ಜಿಲ್ಲಾ ವಾರ್ತಾಧಿಕಾರಿಗಳನ್ನು ಹಾಗೂ ಅಂತರ ಇಲಾಖಾ ಮಾಧ್ಯಮ ಸಮನ್ವಯ ಸಮಿತಿ ಸಭೆಯನ್ನು ಉದ್ದೇಶಿಸಿ ಮುಖ್ಯಮಂತ್ರಿಯವರು ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರು ಮಾಲೀಕರಾಗಿರುತ್ತಾರೆ. ಅವರು ತಮಗಿರುವ ಅಧಿಕಾರವನ್ನು ಮತದಾನದ ಮೂಲಕ ಜನಪ್ರತಿನಿಧಿಗಳಿಗೆ ವರ್ಗಾವಣೆ ಮಾಡುತ್ತಾರೆ. ಆದ ಕಾರಣ ಜನತೆಗೆ ಜವಾಬ್ದಾರಿಯುತವಾಗಿ ಅಧಿಕಾರಕ್ಕೆ ಬಂದ ಸರ್ಕಾರ ನಡೆದುಕೊಳ್ಳಬೇಕಾಗುತ್ತದೆ ಎಂದರು.

ಚುನಾವಣಾ ಪೂರ್ವದಲ್ಲಿ ಪಕ್ಷದ ಸಿದ್ಧಾಂತಗಳಿಗೆ ಅನುಗುಣವಾಗಿ ಆಯಾ ಪಕ್ಷಗಳು ಭರವಸೆಗಳನ್ನು ಪ್ರಣಾಳಿಕೆಗಳ ಮೂಲಕ ಜನತೆಗೆ ನೀಡುತ್ತವೆ. ಜನತೆಗೆ ನೀಡಿದ

ಭರವಸೆಗಳನ್ನು ಜನಪ್ರತಿನಿಧಿಗಳಿಂದ ಈಡೇರಿಸಲು ಸಾಧ್ಯವಾಗದಿದ್ದಲ್ಲಿ ಮತ್ತೆ ಐದು ವರ್ಷದ ನಂತರ ಜನತೆಯ ಮುಂದೆ ಹೋಗುವುದು ಸಾಧ್ಯವಾಗುವುದಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸರ್ಕಾರ ಜಾರಿಗೊಳಿಸುವ ಕಾರ್ಯಕ್ರಮಗಳ ಬಗ್ಗೆ ಜನರಿಗೆ ಮಾಹಿತಿ ಇರಬೇಕು. ಮಾಹಿತಿ ಇದ್ದಾಗ ಮಾತ್ರ ಯೋಜನೆಗಳ ಬಗ್ಗೆ ಜನರಿಂದ ಪ್ರತಿಕ್ರಿಯೆಯನ್ನು ನಿರೀಕ್ಷಿಸಬಹುದು. ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿಯೇ ಇಲ್ಲದಿದ್ದಲ್ಲಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ ಸಾಧ್ಯವಿಲ್ಲ ಎಂದರು.

ಅತಿ ಹೆಚ್ಚು ಒಣಭೂಮಿ ಹೊಂದಿರುವ ಕರ್ನಾಟಕ ರಾಜ್ಯದಲ್ಲಿ "ಕೃಷಿಭಾಗ್ಯ' ಯೋಜನೆ ಒಂದು ವರದಾನ. ಈ ಯೋಜನೆಯ ಬಗ್ಗೆ ಹೆಚ್ಚಿನ ಬೇಡಿಕೆಗಳು ರೈತರಿಂದ ಬರುತ್ತಿದೆ ಎಂದ ಅವರು, ಒಂದು ಲಕ್ಷ ರೈತ ಕುಟುಂಬಗಳಿಗೆ ಕೃಷಿ ಹೊಂಡದ ವ್ಯವಸ್ಥೆ ಮಾಡುವ ಮೂಲಕ ರೈತರು ಬೆಳೆದ ಬೆಳೆಗೆ ರಕ್ಷಣೆ ಒದಗಿಸಲಾಗುತ್ತಿದೆ ಎಂದರು.

ಇದೇ ರೀತಿ ಒಂದು ಕೋಟಿ ಎಂಟು ಲಕ್ಷ ಕುಟುಂಬಗಳಿಗೆ ಅನ್ನಭಾಗ್ಯ, ಒಂದು ಲಕ್ಷ ವಿದ್ಯಾರ್ಥಿಗಳಿಗೆ ವಿಧ್ಯಾಸಿರಿ ಯೋಜನೆಯ ಲಾಭ ದೊರಕುತ್ತಿದೆ. ಮನಸ್ವಿನಿ, ಮೈತ್ರಿ, ಕ್ಷೀರಭಾಗ್ಯ ಮುಂತಾದ ಯೋಜನೆಗಳ ಕುರಿತು ವಾರ್ತಾ ಇಲಾಖೆ ಸಾಕಷ್ಟು ಪ್ರಚಾರ ಮಾಡಿದಲ್ಲಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಸಾಧ್ಯ ಎಂದರು.

ಜಿಲ್ಲಾ ಕೇಂದ್ರಗಳಲ್ಲೂ ಸಹ ಸರ್ಕಾರದ ಅನೇಕ ಅಭಿವೃದ್ಧಿ ಕೆಲಸಗಳು ನಡೆಯುತ್ತಿದ್ದು ಜಿಲ್ಲಾ ವಾರ್ತಾಧಿಕಾರಿಗಳು ಈ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಮಾಧ್ಯಮಗಳ ಮೂಲಕ ಜನರಿಗೆ ಮಾಹಿತಿ ಒದಗಿಸಬೇಕು. ವಾರ್ತಾ ಇಲಾಖೆ ನೈಜ ಸುದ್ದಿಗಳ ಬಗ್ಗೆ ಜನತೆಗೆ ನೈಜ ಚಿತ್ರಣವನ್ನು ಕಟ್ಟಿಕೊಡಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು.

ವಾರ್ತಾ ಇಲಾಖೆ ಹೆಚ್ಚು ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ಸರ್ಕಾರದ ಕೆಲಸ ಕಾರ್ಯಗಳ ಮಾಹಿತಿಯನ್ನು ಜನತೆಯ ಮುಂದೆ ಇಡಬೇಕು. ಈ ನಿಟ್ಟಿನಲ್ಲಿ ವಾರ್ತಾ ಇಲಾಖೆ ಶ್ರಮಿಸಿದಲ್ಲಿ ಪ್ರಜಾಪ್ರಭುತ್ವ ಹೆಚ್ಚು ಯಶಸ್ವಿಯಾಗುತ್ತದೆ ಎಂದ ಮುಖ್ಯಮಂತ್ರಿಗಳು, ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನವನ್ನು ಇಲಾಖೆಗೆ ಒದಗಿಸುವುದಾಗಿ ಈ ಸಂದರ್ಭದಲ್ಲಿ ಭರವಸೆ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀ ಎಂ. ಲಕ್ಷ್ಮೀನಾರಾಯಣ ಅವರು ಮಾತನಾಡಿ ಸರ್ಕಾರದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜನತೆಗೆ ಮುಟ್ಟಿಸುವ ಕೆಲಸ ವಾರ್ತಾಧಿಕಾರಿಗಳದ್ದು, ಅದರಲ್ಲೂ

ಜಿಲ್ಲಾಮಟ್ಟದ ವಾರ್ತಾಧಿಕಾರಿಗಳ ಪಾತ್ರ ಮಹತ್ವವಾಗಿರುತ್ತದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರಾದ ಶ್ರೀ ಎನ್.ಆರ್. ವಿಶುಕುಮಾರ್ ಅವರು ಪ್ರಸ್ತಾವಿಕವಾಗಿ ಮಾತನಾಡಿ, ಸನ್ಮಾನ್ಯ ಮುಖ್ಯಮಂತ್ರಿಗಳ ಆಶಯದಂತೆ ಸರ್ಕಾರದ ಎಲ್ಲ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ವಾರ್ತಾ ಇಲಾಖೆ ಶ್ರಮಿಸುತ್ತಿದೆ. ಈ ಕಾರಣ ಸರ್ಕಾರದ ಬಹುತೇಕ ಯೋಜನೆಗಳ ಮಾಹಿತಿ ಇಂದು ಜನಸಾಮಾನ್ಯರ ನಾಲಿಗೆಯ ಮೇಲಿದೆ ಎಂದ ಅವರು, ಜನತೆಯ ತುಡಿತವನ್ನು ಸರ್ಕಾರದ ಗಮನಕ್ಕೆ ತರುವಂತಹ 'ಜನಮನ' ಕಾರ್ಯಕ್ರಮದ ಅನುಷ್ಠಾನದ ಹೊಣೆಯನ್ನು ವಾರ್ತಾ ಇಲಾಖೆಗೆ ಒದಗಿಸಿಕೊಟ್ಟಂತಹ ಮುಖ್ಯಮಂತ್ರಿಗಳಿಗೆ ತಾವು ಧನ್ಯವಾದ ಅರ್ಪಿಸುವುದಾಗಿ ಈ ಸಂದರ್ಭದಲ್ಲಿ ತಿಳಿಸಿದರು.

ಮುಖ್ಯಮಂತ್ರಿ ಅವರು ಇಲಾಖೆಯ ಕೇಂದ್ರ ಕಚೇರಿಯಲ್ಲಿ ಗಾಂಧೀ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ "ವಾರ್ತಾವಲೋಕನ" ವೀಕ್ಷಿಸಿ, ಇ– ಕಛೇರಿ ಫಲಕ ಅನಾವರಣ ಮಾಡಿದರು. ಇಲಾಖೆಯಲ್ಲಿ ನೂತನವಾಗಿ ಸ್ಥಾಪಿಸಿರುವ ಸಾಮಾಜಿಕ ಜಾಲತಾಣ ಮಾಧ್ಯಮ ಘಟಕಕ್ಕೆ ಚಾಲನೆ ನೀಡಿ, "ಸಾಮಾಜಿಕ ಮಾಧ್ಯಮ ನಿರ್ವಹಣೆ" ಕುರಿತ ಕಿರು ಹೊತ್ತಿಗೆ ಬಿಡುಗಡೆ ಮಾಡಿದರು. ನಂತರ ಅವರು ಎಲ್.ಇ.ಡಿ. ಪರದೆಯ ಮೇಲೆ ಹೆದ್ದಾರಿ ಫಲಕಗಳ ವೀಕ್ಷಣೆ ಮಾಡಿದರು.

ವಾರ್ತಾ ಇಲಾಖೆಯ ನಿರ್ದೇಶಕ ಶ್ರೀ ಎನ್. ಆರ್. ವಿಶುಕುಮಾರ್ ಅವರು ಮುಖ್ಯಮಂತ್ರಿಗಳನ್ನು ಸ್ವಾಗತಿಸಿದರು. ವಾರ್ತಾವಲೋಕನ ಪ್ರಾತ್ಯಕ್ಷಿಕೆ ಬಗ್ಗೆ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು. ಜೀವಸ್ವರ ಮತ್ತು ಅಭಿವೃದ್ಧಿ ಕುರಿತ ಸಾಕ್ಷ್ಯಚಿತ್ರ ಪ್ರಾತ್ಯಕ್ಷಿಕೆ ಪ್ರಸ್ತುತಪಡಿಸಲಾಯಿತು.

ಇದೇ ಸಂದರ್ಭದಲ್ಲಿ ಅಭಿವೃದ್ಧಿ ಆಧಾರಿತ ಬೀದಿ ನಾಟಕ, ಕಲಾ ಜಾಥಾ ಮತ್ತು ಎಲ್.ಇ.ಡಿ. ವಾಹನಗಳ ವೀಕ್ಷಣೆಗೆ ಏರ್ಪಾಡು ಮಾಡಲಾಗಿತ್ತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ, ದಿನೇಶ್ ಅಮೀನ್ ಮಟ್ಟು, ಮಾಧ್ಯಮ ಅಕಾಡೆಮಿ ಅಧ್ಯಕ್ಷ ಶ್ರೀ ಸಿದ್ದರಾಜು, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಶ್ರೀ ಅತೀಖ್, ಇಲಾಖೆಯ ಹಿರಿಯ/ಕಿರಿಯ ಅಧಿಕಾರಿಗಳು, ನೌಕರರು ಪಾಲ್ಗೊಂಡಿದ್ದರು.

ಎಂಆರ್‌ಎಂ/ಬಿಜಿಪಿ/ಜೆಡಿ/ಕೆಎಂ

# ಪುಟಾಣಿಗಳಿಗಾಗಿ ಕಮ್ಮಟ

ಬೆಂಗಳೂರು, ನ. 18 : (ಕರ್ನಾಟಕ ವಾರ್ತೆ)

ಜವಾಹರ್‌ಲಾಲ್ ನೆಹರು ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಹಯೋಗದೊಂದಿಗೆ ಮಕ್ಕಳ ದಿನಾಚರಣೆಯ ಅಂಗವಾಗಿ ಶಾಲಾ ಪುಟಾಣಿಗಳಿಗಾಗಿ ಚಟುವಟಿಕೆಗಳ ಮೂಲಕ ವಿಜ್ಞಾನದ ಸಂಗತಿಗಳನ್ನು ಚರ್ಚಿಸುವ ವಿಶೇಷ ಕಮ್ಮಟವನ್ನು ಹಮ್ಮಿಕೊಂಡಿದೆ.

ನವೆಂಬರ್ 20 ರ ಭಾನುವಾರದಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ಗಂಟೆವರೆಗೆ ನಗರದ ಜವಾಹ್‌ಲಾಲ್ ನೆಹರು ತಾರಾಲಯ, ಶ್ರೀ ಟಿ. ಚೌಡಯ್ಯ ರಸ್ತೆ, ಹೈ ಗ್ರೌಂಡ್ಸ್, ಬೆಂಗಳೂರು – 560 001 ಇಲ್ಲಿ ಪುಟಾಣಿಗಳಿಗಾಗಿ ಕಮ್ಮಟವನ್ನು ಏರ್ಪಡಿಸಿದೆ.

ಮೂರರಿಂದ ಐದನೇ ತರಗತಿಯ ವಿದ್ಯಾರ್ಥಿಗಳು ಈ ಕಮ್ಮಟದಲ್ಲಿ ಪಾಲ್ಗೊಳ್ಳಲು ಅವಕಾಶವಿದ್ದು, ಒಟ್ಟು 30 ವಿದ್ಯಾರ್ಥಿಗಳು ಈ ಕಮ್ಮಟದ ಪ್ರಯೋಜನವನ್ನು ಪಡೆಯಬಹುದಾಗಿದೆ. ನವೆಂಬರ್ 19 ರೊಳಗೆ ಹೆಸರು ನೋಂದಾಯಿಸಿಕೊಂಡವರು ಈ ಕಮ್ಮಟದಲ್ಲಿ ಪಾಲ್ಗೊಳ್ಳಬಹುದಾಗಿದೆ. ಮೊದಲು ಬಂದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ – 2237 9725 / 2226 6084 ಅಥವಾ http://www.taralaya.org/announcements.php ಅನ್ನು ಸಂಪರ್ಕಿಸಬಹುದಾಗಿದೆ.

ಎಸ್.ಎಂ/ಜೆಡಿಎಸ್:ಪಿಆರ್.

# ಮನೆಯಂಗಳದಲ್ಲಿ ಮಾತುಕತೆಯಲ್ಲಿ:

## ಹಿರಿಯ ರಂಗಕರ್ಮಿ ಲಕ್ಷ್ಮೀ ಚಂದ್ರಶೇಖರ್

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಡೆಸುವ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಹಿರಿಯ ರಂಗಕರ್ಮಿ ಶ್ರೀಮತಿ ಲಕ್ಷ್ಮೀ ಚಂದ್ರಶೇಖರ್ ಅವರು ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮ ನವೆಂಬರ್ 19 ರ ಶನಿವಾರ ಸಂಜೆ 4–00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ನಡೆಯಲಿದೆ.

ಅಂದು ಮಧ್ಯಾಹ್ನ 3–00 ಗಂಟೆಗೆ ಚಿಂತಲಪಲ್ಲಿ ವಿ. ಶ್ರೀನಿವಾಸ್ ಮತ್ತು ವೃಂದದವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

ಎಸ್ಎಂ:ಜೆಡಿ:ಜಿಪಿಆರ್.

## ನಾಲ್ಕು ತಿಂಗಳ ಗ್ರಂಥಾಲಯ ತರಬೇತಿ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಸಾರ್ವಜನಿಕ ಗ್ರಂಥಾಲಯ ಇಲಾಖೆಯು ರಾಜ್ಯದ ನಾಲ್ಕು ಕಂದಾಯ ವಿಭಾಗಳಾದ ಬೆಂಗಳೂರು, ಮೈಸೂರು ವಿಭಾಗದ ಮಂಗಳೂರು, ಬೆಳಗಾವಿ ವಿಭಾಗದ ಧಾರವಾಡ ಮತ್ತು ಕಲಬುರಗಿ ವಿಭಾಗಗಳಲ್ಲಿ ನಾಲ್ಕು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಹಮ್ಮಿಕೊಂಡಿದೆ.

ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 40 ರಷ್ಟು, ಎಸ್.ಸಿ./ಎಸ್.ಟಿ.ಗೆ ಶೇಕಡ 35 ರಷ್ಟು ಅಂಕ ಪಡೆದ ಅಭ್ಯರ್ಥಿಗಳು ಈ ತರಬೇತಿಗೆ ಅರ್ಹರಾಗಿದ್ದಾರೆ.

ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯ ಸಹವರ್ತಿಗಳು, ಗ್ರಾಮ ಪಂಚಾಯತಿ ಮೇಲ್ವಿಚಾರಕರು, ಸಂಬಂಧಪಟ್ಟ ಉಪ ನಿರ್ದೇಶಕರು /ಮುಖ್ಯ ಗ್ರಂಥಾಲಯಾಧಿಕಾರಿಗಳ ಮೂಲಕ ಹಾಗೂ ಇತರೆ ಶೈಕ್ಷಣಿಕ ಸಂಸ್ಥೆಯಿಂದ ಬರುವ ಅಭ್ಯರ್ಥಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಜೊತೆಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಸೇವೆಗೆ ಸೇರಿದ ದಿನಾಂಕ, ವೇತನ ಪ್ರಮಾಣ ಪತ್ರ ನಡವಳಿಕೆ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ಲಗತ್ತಿಸಬೇಕು.

20 ಸೀಟುಗಳನ್ನು ಶ್ರೇಷ್ಠತೆಯ ಮೀಸಲಾತಿಯ ಆಧಾರದ ಮೇಲೆ ಆದ್ಯತೆ ನೀಡಲಾಗುವುದು. ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ, ಗ್ರಾಮೀಣ/ಉಓಜನಾ ನಿರಾಶ್ರಿತರು/ಮಾಜಿ ಸೈನಿಕ/ಅಂಗವಿಕಲ/ಕನ್ನಡ ಮಾಧ್ಯಮ ಪ್ರಮಾಣ ಪತ್ರಗಳ ದೃಢೀಕೃತ ನಕಲು ಪ್ರತಿಗಳನ್ನು ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸಲು ಡಿಸೆಂಬರ್ 10 ಕೊನೆಯ ದಿನವಾಗಿರುತ್ತದೆ.

ಉಪ ನಿರ್ದೇಶಕರ ಕಚೇರಿ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು – 1 ದೂರವಾಣಿ ಸಂಖ್ಯೆ 080–22212128, ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಡಿ.ಸಿ. ಕಚೇರಿಯ ಆವರಣ, ಧಾರವಾಡ ದೂರವಾಣಿ ಸಂಖ್ಯೆ 0836 – 2442465, ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಬಾವುಟಗುಡ್ಡೆ, ಶಂಕರಮಠ ರಸ್ತೆ, ಮಂಗಳೂರು,ದೂರವಾಣಿ ಸಂಖ್ಯೆ 0824–2425873 ಹಾಗೂ ಉಪ ನಿರ್ದೇಶಕರ ಕಚೇರಿ, ನಗರ ಕೇಂದ್ರ ಗ್ರಂಥಾಲಯ, ಎಂ.ಎಚ್.ಎಸ್. ಶಾಲೆ ಆವರಣ, ಸೂಪರ್ ಮಾರ್ಕೆಟ್, ಕಲಬುರಗಿ ದೂರವಾಣಿ ಸಂಖ್ಯೆ 08472–221543. ಆಯಾ ಕಂದಾಯ ವಿಭಾಗಗಳಿಂದ ಪಡೆದು ಅರ್ಜಿಯನ್ನು ಸಲ್ಲಿಸಬಹುದಾಗಿದೆ

ಎಸ್‌ಎಂ:ಜೆಡಿ:ಜಿಪಿಆರ್.

## ಆನ್‌ಲೈನ್ ಮೂಲಕ ಪಾವತಿ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಸರ್ಕಾರವು 1000 ಮತ್ತು 500 ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂಪಡೆದಿರುವ ಹಿನ್ನೆಲೆಯಲ್ಲಿ ನೋಂದಣಿ ಮತ್ತು ಮುದ್ರಾಂಕ ಶುಲ್ಕವನ್ನು ಖಜಾನೆ–2 ಪೋರ್ಟಲ್‌ನಲ್ಲಿ ಆನ್‌ಲೈನ್/ಡಿ.ಡಿ./ನಗದು ಮುಖಾಂತರ ಪಾವತಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಸಾರ್ವಜನಿಕರು https://k2.karnataka.gov.in ಗೆ ಭೇಟಿ ನೀಡಿ ಈ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ.

## Online Payment

Bengaluru, November 11 (Karnataka Information):

In the Light of Government demontetizing currency notes of 1000 and 500 face value, a facility for online/DD/cash payment at Stamp Duty and Registration Fee is made available in Khajane-2 portal. Citizens may please visit Khajane-2 portal at https://k2.karnataka.gov.in to avail the services.

## ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ: 3–3–2016 ಅಧಿಸೂಚಿಸಲಾದ ಗ್ರೂಪ್ ಸಿ ತಾಂತ್ರೀಕೇತರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ: 10–9–2016 ರಂದು ನಡೆಸಲಾದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳ ನೋಂದಣಿ ಸಂಖ್ಯೆಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಅಂತರ್ಜಾಲ "http://kpsc.kar.nic.in/Result"ದಲ್ಲಿ ಪ್ರಕಟಿಸಲಾಗಿದೆ.

## ಕೀ ಉತ್ತರ ಪ್ರಕಟ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ: 24–8–2016 ಅಧಿಸೂಚಿಸಲಾದ ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ವೈಜ್ಞಾನಿಕ ಅಧಿಕಾರಿ (ರಸಾಯನಿಕ ವಿಭಾಗ)/ಮನೋವಿಜ್ಞಾನ ವಿಭಾಗ/ತಾಂತ್ರಿಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಒಟ್ಟು 218 ಅಭ್ಯರ್ಥಿಗಳಿಗೆ ನಿರ್ಧಿಷ್ಟ ಪತ್ರಿಕೆಯ ಸ್ವರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answer ನಲ್ಲಿ ಪ್ರಕಟಿಸಿದೆ.

ಸದರಿ ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಕಡೆ ದಿನಾಂಕ 21–11–2016 ಎಂದು ಆಯೋಗದ ಪ್ರಕಟಣೆ ತಿಳಿಸಿದೆ.